# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 01. | ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : 835 |
| 02. | ಮಾನ್ಯ ವಿಧಾನ ಪರಿಷತ್ತು ಸದಸ್ಯರ ಹೆಸರು | : ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| 03. | ಉತ್ತರಿಸುವ ದಿನಾಂಕ | : 26.12.2022 |
| 04. | ಉತ್ತರಿಸುವ ಸಚಿವರು. | : ಗೃಹ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಚಿಕ್ಕಮಕ್ಕಳ ಶಾಲೆಗಳಲ್ಲಿ ಲೈಂಗಿಕ ಕಿರುಕುಳ ಹಾಗೂ ದೌರ್ಜನ್ಯ ಪ್ರಕರಣಗಳು ವರದಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇಂತಹ ಪ್ರಕರಣಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮವೇನು; | **ಹೌದು.**<br><br>**ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣಗಳನ್ನು ತಡೆಗಟ್ಟಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.**<br><br>➢ಮಕ್ಕಳ ಮೇಲಿನ ಅತ್ಯಾಚಾರ & ಲೈಂಗಿಕ ದೌರ್ಜನ್ಯ ಪ್ರಕರಣಗಳಿಗೆ ಸಂಬಂಧಿಸಿದಂತೆ, ಪೊಕ್ಸೋ ಕಾಯ್ದೆ ಅನ್ವಯ ದಾಖಲಿಸಿರುವ ಪ್ರಕರಣಗಳ ವಿಚಾರಣೆಯನ್ನು ನಡೆಸಲು ಈಗಾಗಲೇ ಪ್ರತಿ ಜಿಲ್ಲೆಗೊಂದರಂತೆ ವಿಶೇಷ ನ್ಯಾಯಾಲಯಗಳನ್ನು ಸ್ಥಾಪಿಸಿದ್ದು, ಈ ಪ್ರಕರಣಗಳಲ್ಲಿ ನೊಂದವರ ಪರವಾಗಿ ನ್ಯಾಯಾಲಯಗಳಲ್ಲಿ ಸಮರ್ಥವಾಗಿ ವಾದ ಮಂಡಿಸಲು ವಿಶೇಷ ಸರ್ಕಾರಿ ಅಭಿಯೋಜಕರನ್ನು ಸಹ ನೇಮಿಸಲಾಗಿರುತ್ತದೆ.<br>➢ಮಹಿಳೆಯರು ಮತ್ತು ಮಕ್ಕಳ ಮೇಲಿನ ದೌರ್ಜನ್ಯವನ್ನು ತಡೆಗಟ್ಟುವ ನಿಟ್ಟಿನಲ್ಲಿ 2019-20ನೇ ಸಾಲಿನಲ್ಲಿ ರೂ. 700 ಲಕ್ಷಗಳು ಮತ್ತು 2020-21 ರಲ್ಲಿ ರೂ. 100 ಲಕ್ಷಗಳ ಅನುದಾನವನ್ನು ನಿರ್ಭಯ ಯೋಜನೆ ಅಡಿಯಲ್ಲಿ ಬಿಡುಗಡೆ ಮಾಡಿದ್ದು, ಸದರಿ ಅನುದಾನದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಎರಡು ಹಂತದಲ್ಲಿ 800 ಪೊಲೀಸ್ ಠಾಣೆಗಳಲ್ಲಿ ಹೆಲ್ಪ್ ಡೆಸ್ಕ್‌ಗಳನ್ನು ಸ್ಥಾಪಿಸಲಾಗಿದೆ. ಮುಂದುವರೆದು ಸದರಿ ಯೋಜನೆಗೆ 2021-22ನೇ ಸಾಲಿನಲ್ಲಿ ರೂ. 250 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.<br>➢ಅಪರಿಚಿತ ವ್ಯಕ್ತಿಗಳ ಬಳಿ ಸಂಪರ್ಕ ಇಟ್ಟುಕೊಳ್ಳದಂತೆ, ಆಸೆ ಆಮಿಷಗಳನ್ನು ಒಡ್ಡುವ ಆಸಾಮಿಗಳ ಬಗ್ಗೆ ಮಹಿಳೆಯರಿಗೆ & ಮಕ್ಕಳಿಗೆ |

| | | |
|---|---|---|
| | | ಹಾಗೂ ಗ್ರಾಮಗಳಲ್ಲಿ ಸೂಕ್ತ ತಿಳುವಳಿಕೆಗಳನ್ನು ನೀಡಲಾಗಿರುತ್ತದೆ.<br>➢ಚಾಲ್ತಿಯಲ್ಲಿರುವ ಸಾಮಾಜಿಕ ಜಾಲತಾಣಗಳಾದ ಬ್ಲಾಗ್, ಟ್ವಿಟರ್, ಫೇಸ್‌ಬುಕ್, ಪೊಲೀಸ್ ವೆಬ್ ಸೈಟ್ ಹಾಗೂ ಇತರೆ ಜಾಲತಾಣಗಳ ಮೂಲಕ ಮಾನವ ಕಳ್ಳ ಸಾಗಾಣೆ ಬಗ್ಗೆ ಜಾಗೃತಿ ಮೂಡಿಸುವ ಸಂದೇಶವನ್ನು ಪ್ರಕಟಿಸಲಾಗಿದೆ.<br>➢ಪೋಕ್ಸೋ ಕಾಯ್ದೆಯ ಪರಿಚಯ, ಕಾಯ್ದೆಯಲ್ಲಿ ಪ್ರಕರಣಗಳನ್ನು ದಾಖಲಿಸುವಾಗ ಅನುಸರಿಸಬೇಕಾದ ಕ್ರಮಗಳು, ದೌರ್ಜನ್ಯಕ್ಕೊಳಗಾದ ಮಕ್ಕಳೊಂದಿಗೆ ಹೇಗೆ ನಡೆದುಕೊಳ್ಳಬೇಕು, ಅವರ ಆರೈಕೆ, ವೈದ್ಯಕೀಯ ಚಿಕಿತ್ಸೆಗೆ ಒಳಪಡಿಸುವ ಕ್ರಮಗಳು, ಪುನರ್ವಸತಿ, ಮಾಧ್ಯಮಗಳ ಜವಾಬ್ದಾರಿ, ಸಮಾಜದ ಕರ್ತವ್ಯಗಳು, ಪರಿಹಾರ ಒದಗಿಸುವುದು ಹಾಗೂ ಇನ್ನಿತರ ವಿಷಯಗಳ ಕುರಿತು ತನಿಖಾಧಿಕಾರಿಗಳಿಗೆ ಸಹಾಯವಾಗುವ ನಿಟ್ಟಿನಲ್ಲಿ ನಿರ್ದಿಷ್ಟ ಕಾರ್ಯವಿಧಾನ (ಎಸ್.ಓ.ಪಿ) ಯನ್ನು ಸಿದ್ದಪಡಿಸಿ ಎಲ್ಲಾ ಪೊಲೀಸ್ ಠಾಣೆಗಳಿಗೆ ಒದಗಿಸಲಾಗಿದೆ. |
| ಆ) | ಇಂತಹ ಹೀನ ಕೃತ್ಯಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ತಪ್ಪಿತಸ್ಥರ ವಿರುದ್ಧ ಶೀಘ್ರವಾಗಿ ಶಿಕ್ಷೆಗೊಳಪಡುವಂತಹ ಕಾನೂನಿನ ಅವಶ್ಯಕತೆಯಿದ್ದು, ಇದನ್ನು ರಚನೆ ಮಾಡಲು ಸರ್ಕಾರ ಗಮನಹರಿಸಿದೆಯೇ; | ಮಕ್ಕಳ ಮೇಲಿನ ಅತ್ಯಾಚಾರ ಮತ್ತು ಲೈಂಗಿಕ ದೌರ್ಜನ್ಯ ಪ್ರಕರಣಗಳನ್ನು ತಡೆಗಟ್ಟಲು ಹಾಗೂ ನಿಯಂತ್ರಿಸಲು ಸರ್ಕಾರವು ಗಂಭೀರವಾಗಿ ತಪ್ಪಿತಸ್ಥರನ್ನು ಕಠಿಣ ಶಿಕ್ಷೆಗೆ ಒಳಪಡಿಸುವ ನಿಟ್ಟಿನಲ್ಲಿ ವಿಶೇಷ ಕಾಯ್ದೆ ಪ್ರೊಟೆಕ್ಷನ್ ಆಫ್ ಚಿಲ್ಡ್ರನ್ ಫ್ರಮ್ ಸೆಕ್ಷುವಲ್ ಅಫೆನ್ಸೆಸ್, 2012 (POCSO Act) ಕಾಯ್ದೆಯನ್ನು ಜಾರಿಗೆ ತಂದಿರುತ್ತದೆ. ಈ ಕಾಯ್ದೆಯಲ್ಲಿ ಮಕ್ಕಳ ಮೇಲೆ ಅತ್ಯಾಚಾರ ನಡೆಸಿರುವ ಆರೋಪಿಗೆ ಜೀವಾವಧಿ ಶಿಕ್ಷೆಯಿಂದ ಮರಣದಂಡನೆ ಶಿಕ್ಷೆಯನ್ನು ವಿಧಿಸುವ ಕಾನೂನನ್ನು ರೂಪಿಸಿರುತ್ತದೆ.<br>➢ಶಿಕ್ಷೆಯ ಪ್ರಮಾಣವನ್ನು ಹೆಚ್ಚಿಸಿರುತ್ತದೆ.<br>➢ಪ್ರಕರಣದ ತನಿಖಾ ಅವಧಿಯನ್ನು 90 ದಿನದಿಂದ 60 ದಿನಗಳಿಗೆ ಕಡಿತಗೊಳಿಸಿ ಪೂರ್ಣಗೊಳಿಸಬೇಕೆಂದು ನಿರ್ದೇಶಿಸಲಾಗಿರುತ್ತದೆ.<br>➢12 ರಿಂದ 16 ವರ್ಷದೊಳಗಿನ ಹೆಣ್ಣು ಮಕ್ಕಳ ಅತ್ಯಾಚಾರ ಅಥವಾ ಸಾಮೂಹಿಕ ಅತ್ಯಾಚಾರ ಪ್ರಕರಣಗಳಲ್ಲಿ ಆರೋಪಿಗಳಿಗೆ ಜಾಮೀನು ಮಂಜೂರಿಸುವುದನ್ನು ನಿಷೇಧಿಸಲಾಗಿದೆ.<br>➢ನ್ಯಾಯಾಲಯದ ವಿಚಾರಣೆಯನ್ನು 02 ತಿಂಗಳಲ್ಲಿ |

| | | |
|---|---|---|
| | | ಹಾಗೂ ಮೇಲ್ಮನವಿಗಳನ್ನು 06 ತಿಂಗಳುಗಳಲ್ಲಿ ಇತ್ಯರ್ಥಪಡಿಸುವುದು.<br>➢ಕನಿಷ್ಠ 20 ವರ್ಷಗಳ ಶಿಕ್ಷೆಯಿಂದ ಆರೋಪಿಯ ಜೀವ ಇರುವ ವರೆಗೆ ಸೆರೆವಾಸದ ಶಿಕ್ಷೆ ಮತ್ತು ದಂಡ ಅಥವಾ ಮರಣದಂಡನೆ ಶಿಕ್ಷೆ ವಿಧಿಸಬಹುದಾಗಿರುತ್ತದೆ.<br>➢ಪ್ರಕರಣಗಳ ವಿಚಾರಣೆಯನ್ನು ನಡೆಸಲು ವಿಶೇಷ ನ್ಯಾಯಾಲಯಗಳನ್ನು ಸ್ಥಾಪಿಸಲಾಗಿರುತ್ತದೆ. |
| ಇ) | ಪೋಕ್ಸೋ ಕಾಯ್ದೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿದರೂ ಸಹ ಲೈಂಗಿಕ ಕಿರುಕುಳ ಮತ್ತು ದೌರ್ಜನ್ಯ ಪ್ರಕರಣಗಳು ವರದಿಯಾಗುತ್ತಲೇ ಇದ್ದು, ಪ್ರಕರಣ ದಾಖಲಾತಿ ಕಡಿಮೆಯಾಗದೆ ಅಪರಾಧಿಗಳಿಗೆ ಬೇಗ ಶಿಕ್ಷೆಯಾಗಲು ಕಠಿಣ ಕಾನೂನನ್ನು ಹೊರತರಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ರಾಜ್ಯದಲ್ಲಿ ಪೋಕ್ಸೋ ಕಾಯ್ದೆಯನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಲಾಗುತ್ತಿದೆ. ಪೋಕ್ಸೋ ಕಾಯ್ದೆಯ ಬಗ್ಗೆ ಹೆಚ್ಚಿನ ಅರಿವು ಸಾರ್ವಜನಿಕರಿಗೆ ಇರುವುದರಿಂದ ಲೈಂಗಿಕ ದೌರ್ಜನ್ಯ ಪ್ರಕರಣಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ನೊಂದವರು ಮುಕ್ತವಾಗಿ, ಭಯ ಭೀತಿ ಇಲ್ಲದೆ ಪೊಲೀಸ್ ಠಾಣೆಗೆ ಬಂದು ದೂರುಗಳನ್ನು ದಾಖಲಿಸುತ್ತಿದ್ದಾರೆ.<br>ಇದರಿಂದ ಮಕ್ಕಳ ಮೇಲಿನ ಪ್ರತಿ ಲೈಂಗಿಕ ದೌರ್ಜನ್ಯ ಪ್ರಕರಣವು ಬೆಳಕಿಗೆ ಬರುತ್ತಿದ್ದು, ಪ್ರಕರಣಗಳು ದಾಖಲಾಗುತ್ತಿವೆ.<br>ಮಕ್ಕಳ ಮೇಲಿನ ಅತ್ಯಾಚಾರ/ಲೈಂಗಿಕ ದೌರ್ಜನ್ಯ ಪ್ರಕರಣಗಳಲ್ಲಿ ಆರೋಪಿಗಳಿಗೆ ಗರಿಷ್ಠ ಜೀವ ಇರುವವರೆಗೆ ಕಾರಾಗೃಹ ವಾಸ ಅಥವಾ ಮರಣದಂಡನೆ ಶಿಕ್ಷೆ ವಿಧಿಸುವ ಕಾನೂನನ್ನು ಜಾರಿಗೆ ತಂದು ಸರ್ಕಾರವು ಕಠಿಣ ಕ್ರಮ ಕೈಗೊಂಡಿರುತ್ತದೆ. |

HD 24 SDN 2022

(ಆರಗ ಜ್ಞಾನೇಂದ್ರ)
ಗೃಹ ಸಚಿವರು